# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1260 |
| 2 | ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 19-12-2024 |
| 4 | ಉತ್ತರಿಸುವವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಉತ್ತರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ದೊಡ್ಡ ಬಿದರಕಲ್ಲು ಚನ್ನನಾಯಕನ ಪಾಳ್ಯ, ತಿಪ್ಪೇನಹಳ್ಳಿ, ಇತ್ಯಾದಿ ಗ್ರಾಮಗಳನ್ನು ಯಾವ ದಿನಾಂಕದಂದು ಬಿಬಿಎಂಪಿ ವ್ಯಾಪ್ತಿಗೆ ಒಳಪಡಿಸಲಾಯಿತು; ಸದರಿ ಗ್ರಾಮಗಳನ್ನು ಬಿಬಿಎಂಪಿ ವ್ಯಾಪ್ತಿಗೊಳಪಡಿಸಿದ ನಂತರ ಬಿಬಿಎಂಪಿ ವತಿಯಿಂದ ಈವರೆವಿಗೂ ಯಾವ್ಯಾವ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ; (ವಿವರ ನೀಡುವುದು) | • ಬೆಂಗಳೂರು ಉತ್ತರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ದೊಡ್ಡ ಬಿದರಕಲ್ಲು ಚನ್ನನಾಯಕನ ಪಾಳ್ಯ, ತಿಪ್ಪೇನಹಳ್ಳಿ, ಇತ್ಯಾದಿ ಗ್ರಾಮಗಳು ದಿನಾಂಕ:16-01-2007 ರಂದು ಬಿಬಿಎಂಪಿಗೆ ಹಸ್ತಾಂತರಗೊಂಡಿರುತ್ತವೆ.<br>• ಸದರಿ ಗ್ರಾಮಗಳನ್ನು ಬಿಬಿಎಂಪಿಯ ವ್ಯಾಪ್ತಿಗೊಳಪಡಿಸಿದ ನಂತರ ಹಂತ ಹಂತವಾಗಿ ಅನುದಾನಕ್ಕೆ ತಕ್ಕಂತೆ ಕೊಳವೆ ಬಾವಿ ಕೊರೆದು ಕುಡಿಯುವ ನೀರು ಸರಬರಾಜು, ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ, ಚರಂಡಿ ಹಾಗೂ ರಸ್ತೆಗಳ ನಿರ್ಮಾಣದಂತಹ ಮೂಲಭೂತ ಸೌಕರ್ಯಗಳನ್ನು ಪಾಲಿಕೆ ವತಿಯಿಂದ ಒದಗಿಸಲಾಗಿರುತ್ತದೆ. |
| ಆ | ಚನ್ನನಾಯಕನ ಪಾಳ್ಯದ ಪಕ್ಕದಲ್ಲಿ ಮತ್ತು ಎನ್,ಹೆಚ್-4 ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಚಿಕ್ಕಬಿದರಕಲ್ಲು ಗ್ರಾಮವನ್ನು ಬಿಬಿಎಂಪಿ ವ್ಯಾಪ್ತಿಗೆ ಒಳಪಡಿಸದೇ ಇರಲು ಕಾರಣಗಳೇನು; ಈ ಗ್ರಾಮವನ್ನು ಯಾವ ಕಾಲಮಿತಿಯೊಳಗೆ ಬಿಬಿಎಂಪಿ ವ್ಯಾಪ್ತಿಗೊಳಪಡಿಸಿ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗುವುದು? | • ಪ್ರಸ್ತುತ ಚಿಕ್ಕಬಿದರಕಲ್ಲು ಗ್ರಾಮವನ್ನು ಬಿಬಿಎಂಪಿ ವ್ಯಾಪ್ತಿಗೆ ಒಳಪಡಿಸುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ನಅಇ 216 ಬಿಬಿಎಸ್ 2024(ಇ)

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ